ಕರ್ನಾಟಕ ವಿಧಾನ ಪರಿಷತ್

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ	466
ಮಾನ್ಯ ಸದಸ್ಯರ ಹೆಸರು	ಶ್ರೀ ಬಿ.ಜಿ. ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)
ಉತ್ತರಿಸಬೇಕಾದ ದಿನಾಂಕ	22.07.2019
ಉತ್ತರಿಸುವ ಸಚಿವರು	ಮಾನ್ಯ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು

ಕ್ರ.ಸಂ	ಪ್ರಶ್ನೆ	ಉತ್ತರ
ಅ	ಕಲಬುರಗಿ ಮತ್ತು ಯಾದಗಿರಿ ಜಿಲ್ಲೆಗಳಲ್ಲಿರುವ ಹಿಂದುಳಿದ ವರ್ಗಗಳ ವಸತಿನಿಲಯಗಳಲ್ಲಿ ಅಗತ್ಯ ಮೂಲ ಸೌಲಭ್ಯಗಳ ಕೊರತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಮೂಲಭೂತ ಸೌಲಭ್ಯಗಳೊಂದಿಗೆ ಅವುಗಳ ಸ್ವಚ್ಛತೆ ಮತ್ತು ದುರಸ್ತಿ ಕಾರ್ಯಗಳನ್ನು ಯಾವಾಗ ಮಾಡಲಾಗುವುದು; (ವಿವರ ನೀಡುವುದು)	ಕಲಬುರಗಿ ಮತ್ತು ಯಾದಗಿರಿ ಜಿಲ್ಲೆಗಳಲ್ಲಿ ಬಾಡಿಗೆ ಕಟ್ಟಡಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಕೆಲವೊಂದು ವಿದ್ಯಾರ್ಥಿನಿಲಯಗಳಲ್ಲಿ ಮಂಜೂರಾತಿ ಸಂಖ್ಯೆಗನುಗುಣವಾಗಿ ಶೌಚಾಲಯ ಮತ್ತು ಸ್ನಾನಗೃಹಗಳ ಕೊರತೆ ಇರುತ್ತದೆ, ಆಯವ್ಯಯದಲ್ಲಿ ಒದಗಿಸುವ ಅನುದಾನದ ಲಭ್ಯತೆ ಹಾಗೂ ನಿವೇಶನ ಲಭ್ಯತೆಯ ಅನುಸಾರ ಈ ವಿದ್ಯಾರ್ಥಿನಿಲಯಗಳಿಗೆ ಹಂತ ಹಂತವಾಗಿ ಸ್ವಂತ ಕಟ್ಟಡಗಳನ್ನು ನಿರ್ಮಿಸಿ, ಮೂಲಭೂತ ಸೌಕರ್ಯಗಳನ್ನು ಕಲ್ಪಿಸಲಾಗುತ್ತದೆ. ವಿದ್ಯಾರ್ಥಿನಿಲಯಗಳಲ್ಲಿನ ವಿದ್ಯಾರ್ಥಿಗಳ ಸಂಖ್ಯಾಬಲಕ್ಕನುಗುಣವಾಗಿ ಶೌಚಾಲಯ / ಸ್ನಾನ ಗೃಹಗಳ ಸ್ವಚ್ಛತೆ ಹಾಗೂ ಸ್ವಚ್ಛತಾ ಸಾಮಗ್ರಿಗಳಿಗಾಗಿ ಈ ಕೆಳಕಂಡಂತೆ ವೆಚ್ಚ ಭರಿಸಲಾಗುತ್ತಿದ್ದು, ಸದರಿ ಸಾಮಗ್ರಿಗಳನ್ನು ಉಪಯೋಗಿಸಿಕೊಂಡು ನಿಲಯಗಳನ್ನು ಸ್ವಚ್ಛವಾಗಿಡಲು ಕ್ರಮವಹಿಸಲಾಗುತ್ತಿದೆ. 1. ಶೌಚಾಲಯಗಳ / ಆವರಣದ ಸ್ವಚ್ಛತೆ (ಪ್ರತಿ ವಿದ್ಯಾರ್ಥಿ ನಿಲಯಕ್ಕೆ ಪ್ರತಿ ತಿಂಗಳಿಗೆ) 50 ಸಂಖ್ಯಾಬಲದ ವರೆಗೆ – ರೂ.1,000/- 51 ರಿಂದ 100 ಸಂಖ್ಯಾಬಲದ ವರೆಗೆ – ರೂ.1,250/- 101 ರಿಂದ 150 ರವರೆಗೆ – ರೂ.1,500/- 151 ಕ್ಕೂ ಮೇಲ್ಪಟ್ಟು – ರೂ.2,000/- ಸೆಪ್ಟಿಕ್ ಟ್ಯಾಂಕ್ ಸ್ವಚ್ಛಗೊಳಿಸಲು (ವಾರ್ಷಿಕ) – ರೂ.5,000/- 2. ಸ್ವಚ್ಛತಾ ಸಾಮಗ್ರಿಗಳಿಗಾಗಿ (ಪ್ರತಿ ವಿದ್ಯಾರ್ಥಿ ನಿಲಯಕ್ಕೆ ಪ್ರತಿ ತಿಂಗಳಿಗೆ) 50 ಸಂಖ್ಯಾಬಲದ ವರೆಗೆ – ರೂ.500/- 51 ರಿಂದ 100 ಸಂಖ್ಯಾಬಲದ ವರೆಗೆ – ರೂ.750/- 101 ರಿಂದ 150 ರವರೆಗೆ – ರೂ.1,000/- 151 ಕ್ಕೂ ಮೇಲ್ಪಟ್ಟು – ರೂ.1,250/- ಕಲಬುರಗಿ ಜಿಲ್ಲೆ ಮತ್ತು ಯಾದಗಿರಿ ಜಿಲ್ಲೆಯಲ್ಲಿನ ವಿದ್ಯಾರ್ಥಿ ನಿಲಯಗಳಿಗೆ ಅಗತ್ಯ ದುರಸ್ಥಿ, ಶೌಚಾಲಯ, ಸ್ನಾನಗೃಹ, ಸುಣ್ಣ-ಬಣ್ಣ ಹಾಗೂ ಹೆಚ್ಚುವರಿ ಕೊಠಡಿ ನಿರ್ಮಾಣ ಮಾಡಲು ಕ್ರಮವಾಗಿ ರೂ.21.28 ಲಕ್ಷ ಹಾಗೂ ರೂ.21.28 ಲಕ್ಷಗಳ ಅನುದಾನದಲ್ಲಿ ದುರಸ್ತಿ ಕಾಮಗಾರಿಗಳನ್ನು ಕೈಗೊಳ್ಳಲಾಗಿರುತ್ತದೆ. ವಿವರಗಳನ್ನು ಅನುಬಂಧ-1ರಲ್ಲಿ ನೀಡಲಾಗಿದೆ.

...2

ಆ	ಮೇಲ್ಕಂಡ ಜಿಲ್ಲೆಗಳಲ್ಲಿ ಎಷ್ಟು ಹಿಂದುಳಿದ ವರ್ಗಗಳ ವಸತಿನಿಲಯಗಳಿವೆ? (ಸಂಪೂರ್ಣ ವಿವರ ನೀಡುವುದು)	ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯಿಂದ ಕಲಬುರಗಿ ಜಿಲ್ಲೆಯಲ್ಲಿ ಒಟ್ಟು 128 ವಿದ್ಯಾರ್ಥಿನಿಲಯಗಳು ಹಾಗೂ ಯಾದಗಿರಿ ಜಿಲ್ಲೆಯಲ್ಲಿ ಒಟ್ಟು 65 ವಿದ್ಯಾರ್ಥಿನಿಲಯಗಳು ಕಾರ್ಯನಿರ್ವಹಿಸುತ್ತಿರುತ್ತವೆ. ವಿದ್ಯಾರ್ಥಿನಿಲಯಗಳ ವಿವರಗಳನ್ನು ಇಲಾಖೆಯ ವೆಬ್‌ಸೈಟ್ www.backwardclasses.kar.nic.in ನೀಡಲಾಗಿದೆ.

ಸಂ: ಹಿಂವಕ 155 ಬಿಎಂಎಸ್ 2019

(ಸಿ.ಪುಟ್ಟರಂಗಶೆಟ್ಟಿ)
ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು.